ಇ) ಆದಷ್ಟು ಜಾಗ್ರತೆಯಾಗಿ ಪೂರ್ಣಗೊಳಿಸಲಾಗುವುದು.

ಈ) ಈ ಯೋಜನೆಯಡಿಯಲ್ಲಿ ಗುರುತಿಸಲಾದ ಕಾಮಗಾರಿಗಳು ಪೂರ್ಣಗೊಂಡಾಗ ಮಾರುಕಟ್ಟೆಯನ್ನು ಹಳೆಯ ಯಾರ್ಡಿನಿಂದ ಹೊಸ ಯಾರ್ಡಿಗೆ ಸ್ಥಳಾಂತರಿಸಲು ಸಾಧ್ಯ.

ಸಂಜಯ ಸಹಕಾರಿ ನೂಲಿನ ಗಿರಣಿ, ಹುಬ್ಬಳ್ಳಿ ಇದಕ್ಕೆ ತಾಂತ್ರಿಕ ಮಂಜೂರಾತಿ

682 - ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.?

ಅ) *1984ರಲ್ಲಿ ಸಚಿವ ಸಂಪುಟವು ಹುಬ್ಬಳ್ಳಿಯಲ್ಲಿ ಪ್ರಾರಂಭಿಸಬೇಕಾಗಿದ್ದ ಸಂಜಯ ಸಹಕಾರಿ ನೂಲಿನ ಗಿರಣಿಗೆ ತನ್ನ ಒಪ್ಪಿಗೆಯನ್ನು ನೀಡಿದ್ದರೂ ಸಹ ಇದುವರೆವಿಗೂ ಗಿರಣಿಯನ್ನು ಪ್ರಾರಂಭಿಸಲು ರಾಜ್ಯ ಸರ್ಕಾರದಿಂದ ಹಣಕಾಸಿನ ಹಾಗೂ ತಾಂತ್ರಿಕ ಮಂಜೂರಾತಿ ನೀಡದಿರಲು ಕಾರಣಗಳೇನು?*

ಆ) *ಈ ನೂಲಿನ ಗಿರಣಿಯನ್ನು ಪ್ರಾರಂಭಿಸುವ ಸಲುವಾಗಿ 1982 ರಲ್ಲಿ ನೊಂದಣಿ ಮಾಡಿದ್ದು ಇದಕ್ಕೆ ಅಗತ್ಯವಿರುವ ಶೇರು ಬಂಡವಾಳವನ್ನು ರೈತರುಗಳಿಂದ ಸಂಗ್ರಹಿಸಿ ಹಲವಾರು ವರ್ಷಗಳು ಕಳೆದಿದ್ದರೂ ಗಿರಣಿಯ ಪ್ರಾರಂಭಕ್ಕೆ ತಾಂತ್ರಿಕ ಹಾಗೂ ಹಣಕಾಸಿನ ಮಂಜೂರಾತಿಯನ್ನು ನೀಡದೇ ಇರುವುದರಿಂದ ತಾಲ್ಲೂಕಿನ ರೈತರುಗಳಿಗೆ ತೊಂದರೆಯಾಗಿರುವ ವಿಚಾರ ಸರ್ಕಾರಕ್ಕೆ ತಿಳಿದಿದೆಯೇ?*

ಇ) *ಹಾಗಿದ್ದಲ್ಲಿ ಸರ್ಕಾರ ಆದಷ್ಟು ಬೇಗ ಈ ನೂಲಿನ ಗಿರಣಿಗೆ ತಾಂತ್ರಿಕ ಮತ್ತು ಹಣಕಾಸಿನ ಮಂಜೂರಾತಿಯನ್ನು ನೀಡಲು ಕ್ರಮ ಕೈಗೊಳ್ಳುತ್ತದೆಯೇ?*

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಸಚಿವರು).

ಅ) ಸದರಿ ಪ್ರಸ್ತಾವನೆಗೆ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ನವದೆಹಲಿ ಇವರಿಂದ ಅಂಗೀಕಾರ ದೊರೆತಿರುವುದಿಲ್ಲದಿರುವುದೇ ಕಾರಣ.

ಆ) ಹೌದು.

ಇ) ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮ ನವದೆಹಲಿ ಇವರಿಂದ ಅಂಗೀಕಾರ ದೊರೆತ ನಂತರ ವಿಷಯವನ್ನು ಪರಿಶೀಲಿಸಿ ಆದಷ್ಟು ಬೇಗ ಕ್ರಮ ಜರುಗಿಸಲಾಗುವುದು.

ಹೋಟೆಲ್ ತಿಂಡಿ ಬೆಲೆ ಇಳಿಸುವ ಬಗ್ಗೆ

494 - ಶ್ರೀ ವಾಟಾಳ್ ನಾಗರಾಜ್. (ಚಾಮರಾಜನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೋಟೆಲ್ ತಿಂಡಿ ಬೆಲೆ ಏರಿರುವುದರಿಂದ ಜನ ಸಾಮಾನ್ಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಹೋಟೆಲ್ ತಿಂಡಿ ಬೆಲೆಗಳನ್ನು ಇಳಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಹೌದು ಬಂದಿದೆ.

ಆ) ರಾಜ್ಯದಲ್ಲಿ ನಗರ, ಪಟ್ಟಣ ಮತ್ತು ಇತರ ಸ್ಥಳಗಳಲ್ಲಿರುವ ಹೋಟೆಲು ಮತ್ತು ಉಪಹಾರ ಮಂದಿರಗಳು ಸರ್ಕಾರದಿಂದ ನಿಯಂತ್ರಿತ ದರಗಳಲ್ಲಿ ಅಕ್ಕಿ, ಗೋಧಿ, ಸಕ್ಕರೆ ಮತ್ತು ಇತರ ಆಹಾರ ಧಾನ್ಯಗಳನ್ನು ಈಗ ಸದ್ಯದಲ್ಲಿ ಕೊಳ್ಳುತ್ತಿಲ್ಲ. ಇದರ ಬದಲಾಗಿ ಅವುಗಳು ಮುಕ್ತ ಮಾರುಕಟ್ಟೆಯಲ್ಲಿ ಚಾಲ್ತಿ ಇರುವ ದರಗಳನ್ನು